**Bangalore**
**Regional News**
**07.05.2026: 14.30hrs**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**<u>ಮುಖ್ಯಾಂಶಗಳು :</u>**

**1. ಆಪರೇಷನ್ ಸಿಂದೂರ್‌ಗೆ ಒಂದು ವರ್ಷ; ಭಯೋತ್ಪಾದನೆಗೆ ಭಾರತ ತಲೆಬಾಗದು - ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ**

**2. ಮೈಸೂರಿನಲ್ಲಿ ಆರೋಗ್ಯ ಇಲಾಖೆಗೆ ಆಂಬುಲೆನ್ಸ್ ಹಸ್ತಾಂತರ - ಮುಖ್ಯಮಂತ್ರಿ ಸಿದ್ದರಾಮಯ್ಯ ಹಸಿರುನಿಶಾನೆ**

**3. ಪಶ್ಚಿಮ ಬಂಗಾಳದಲ್ಲಿ ಗೆಲುವಿಗಾಗಿ ಬಿಜೆಪಿಯಿಂದ ಕೇಂದ್ರ ಸಂಸ್ಥೆಗಳ ದುರುಪಯೋಗ - ಸಚಿವ ಪ್ರಿಯಾಂಕ್ ಖರ್ಗೆ ಆರೋಪ**

**4. ಪೌರಾಡಳಿತ ನಿರ್ದೇಶನಾಲಯದಿಂದ ವಿವಿಧ ಮಹಾನಗರ ಪಾಲಿಕೆ ಹಾಗೂ ಪುರಸಭೆ ಅಧಿಕಾರಿಗಳ ವರ್ಗಾವಣೆ**

**************

**ಭಯೋತ್ಪಾದನೆ ಮತ್ತು ರಾಷ್ಟ್ರ ವಿರೋಧಿ ಶಕ್ತಿಗಳ ಎದುರು ಭಾರತ ಎಂದಿಗೂ ಮಣಿಯುವುದಿಲ್ಲ ಎಂಬುದಕ್ಕೆ ಆಪರೇಷನ್ ಸಿಂದೂರ್ ಒಂದು ದೃಢ ಸಂಕೇತವಾಗಿದೆ ಎಂದು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ತಿಳಿಸಿದ್ದಾರೆ. ಆಪರೇಷನ್ ಸಿಂದೂರ್ ಕಾರ್ಯಾಚರಣೆ ನಡೆದು, ಒಂದು ವರ್ಷ ತುಂಬಿರುವ ಹಿನ್ನೆಲೆಯಲ್ಲಿ ಸಾಮಾಜಿಕ ಮಾಧ್ಯಮದಲ್ಲಿ ಸಂದೇಶ ಹಂಚಿಕೊಂಡಿರುವ ಸಚಿವರು, ಇದು ಕೇವಲ ಮಿಲಿಟರಿ ಕಾರ್ಯಾಚರಣೆ ಆಗಿರದೆ ದೇಶದ ಏಕತೆ ಮತ್ತು ಧೈರ್ಯದ ಸಂಕೇತವಾಗಿದೆ. ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವದಲ್ಲಿ ಭಾರತದ ತಾಳ್ಮೆಯನ್ನು ದೌರ್ಬಲ್ಯವೆಂದು ಭಾವಿಸಬಾರದು ಎಂಬ ಸ್ಪಷ್ಟ ಸಂದೇಶವನ್ನು ಜಗತ್ತಿಗೆ ತಿಳಿಸಲಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿ ಆಪರೇಷನ್ ಸಿಂದೂರ್ ಕಾರ್ಯಾಚರಣೆಯ ಯಶಸ್ಸನ್ನು ಸ್ಮರಿಸಿರುವ ಕೇಂದ್ರ ಗ್ರಾಹಕ ವ್ಯವಹಾರಗಳ ಸಚಿವ ಪ್ರಲ್ಹಾದ್ ಜೋಶಿ, ಒಂದು ವರ್ಷದ ಹಿಂದೆ ನಮ್ಮ ಸಶಸ್ತ್ರ ಪಡೆಗಳು ತಮ್ಮ ಶೌರ್ಯವನ್ನು ಪ್ರದರ್ಶಿಸಿ, ಜನರ ಮೇಲೆ ದಾಳಿ ಮಾಡಿದವರಿಗೆ ಸೂಕ್ತ ಉತ್ತರ ನೀಡಿತು. ಪ್ರತಿಯೊಬ್ಬ ಭಾರತೀಯನು ಸಶಸ್ತ್ರ ಪಡೆಗಳ ಬಗ್ಗೆ ಹೆಮ್ಮೆಯ ಭಾವನೆ ಹೊಂದಿದ್ದಾನೆ ಎಂದಿದ್ದಾರೆ. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹಾಗೂ ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ ಕೂಡ ಕಾರ್ಯಾಚರಣೆಯನ್ನು ಸ್ಮರಿಸಿದ್ದು,**

ಪಹಲ್ಗಾಮ್ ಉಗ್ರರ ದಾಳಿಗೆ ನಡೆಸಲಾದ ಈ ಕಾರ್ಯಾಚರಣೆ, ಭಯೋತ್ಪಾದನೆಯ ವಿರುದ್ಧ ಭಾರತದ ಶೂನ್ಯ ಸಹಿಷ್ಣುತಾ ನೀತಿಯನ್ನು ಎತ್ತಿಹಿಡಿದಿದೆ ಎಂದು ತಿಳಿಸಿದ್ದಾರೆ.

**********

ಮೈಸೂರಿನಲ್ಲಿಂದು ಬೆಳಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ, ದಿವಂಗತ ರಾಕೇಶ್ ಸಿದ್ದರಾಮಯ್ಯ ಅವರ ಸ್ಮರಣಾರ್ಥ ಸಮತಾ ಟ್ರಸ್ಟ್ ಇಲಾಖೆ ವತಿಯಿಂದ ಆರೋಗ್ಯ ಇಲಾಖೆಗೆ ನೀಡಲಾದ ಆಂಬುಲೆನ್ಸ್‌ಗಳಿಗೆ ಹಸಿರುನಿಶಾನೆ ತೋರಿದರು. ಕಾರ್ಯಕ್ರಮದಲ್ಲಿ ಈ ಆಂಬುಲೆನ್ಸ್‌ಗಳನ್ನು ಆರೋಗ್ಯ ಇಲಾಖೆಗೆ ಹಸ್ತಾಂತರಿಸಲಾಗಿದ್ದು, ಇವು ಜಿಲ್ಲೆಯ ಜನರಿಗೆ ಉಚಿತ ತುರ್ತು ಸೇವೆ ಒದಗಿಸಲಿವೆ. ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಲಕ್ಷ್ಮೀಕಾಂತ ರೆಡ್ಡಿ, ಜಿಲ್ಲಾ ಆರೋಗ್ಯಾಧಿಕಾರಿ ಡಾ. ಪಿ.ಸಿ. ಕುಮಾರಸ್ವಾಮಿ ಸೇರಿದಂತೆ ಹಲವು ಅಧಿಕಾರಿಗಳು ಉಪಸ್ಥಿತರಿದ್ದರು.

**********

ಪಶ್ಚಿಮ ಬಂಗಾಳದ ೫೦ ಕ್ಷೇತ್ರಗಳಲ್ಲಿ ಮತದಾರರ ಪಟ್ಟಿಯಿಂದ ಹೆಸರು ಕೈಬಿಟ್ಟಿರುವ ಪ್ರಮಾಣ, ಗೆಲುವಿನ ಅಂತರಕ್ಕಿಂತ ಹೆಚ್ಚಿದೆ ಮತ್ತು ಇದರಲ್ಲಿ ಅರ್ಧಕ್ಕಿಂತ ಹೆಚ್ಚು ಸ್ಥಾನಗಳನ್ನು ಬಿಜೆಪಿ ಗೆದ್ದುಕೊಂಡಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಆರೋಪಿಸಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿ ಈ ಕುರಿತು ಅಭಿಪ್ರಾಯ ಹಂಚಿಕೊಂಡಿರುವ ಅವರು, ಫಲಿತಾಂಶಗಳನ್ನು ಮೊದಲೇ ನಿರ್ಧರಿಸಿ, ಅದಕ್ಕೆ ಪೂರಕವಾಗಿ ಸಂಸ್ಥೆಗಳನ್ನು ಹೇಗೆ ನಿರ್ವಹಿಸಬಹುದು ಎಂಬುದಕ್ಕೆ ಇದೊಂದು ಉದಾಹರಣೆಯಾಗಿದೆ ಎಂದು ಟೀಕಿಸಿದ್ದಾರೆ. ಕೇವಲ ಬಂಗಾಳದಲ್ಲಿ ತಾರ್ಕಿಕ ವ್ಯತ್ಯಾಸದ ಹೆಸರಿನಲ್ಲಿ ಮತದಾರರ ಹೆಸರು ಅಳಿಸುವಿಕೆ, ಕೇಂದ್ರ ಪಡೆಗಳ ಅತಿಯಾದ ಬಳಕೆ, ಅಧಿಕಾರಿಗಳ ಸಾಮೂಹಿಕ ವರ್ಗಾವಣೆ ಮತ್ತು ಎಣಿಕೆ ಕಾರ್ಯಕ್ಕೆ ಕೇಂದ್ರ ನೌಕರರ ನೇಮಕದಂತಹ ಕ್ರಮಗಳ ಮೂಲಕ ಚುನಾವಣಾ ಪ್ರಕ್ರಿಯೆಯನ್ನು ನಿಯಂತ್ರಿಸಲಾಗಿದೆ ಎಂದು ಸಚಿವರು ಆರೋಪಿಸಿದ್ದಾರೆ.

**********

ಭಾರತದ ಅಧ್ಯಕ್ಷತೆಯಲ್ಲಿ "ನಗರ ಸಂಚಾರ ವ್ಯವಸ್ಥೆಯ ಮೇಲೆ ಗಮನದೊಂದಿಗೆ ಜೀವನ ಸುಗಮತೆ" ಎಂಬ ಆಶಯದೊಂದಿಗೆ ೫ನೇ ಬ್ರಿಕ್ಸ್ ಸುಪ್ರೀಂ ಆಡಿಟ್ ಇನ್ಸ್ಟಿಟ್ಯೂಷನ್ಸ್ - ಎಸ್ಎಐ ನಾಯಕರ ಶೃಂಗಸಭೆಯು ಇಂದಿನಿಂದ ಬೆಂಗಳೂರಿನಲ್ಲಿ ಆಯೋಜಿಸಲಾಗಿದೆ. ಭಾರತದ ಕಂಟ್ರೋಲರ್ ಮತ್ತು ಆಡಿಟರ್ ಜನರಲ್-ಸಿಎಜಿ ಆಯೋಜಿಸಿರುವ ಈ ಸಮಾವೇಶದಲ್ಲಿ ಬ್ರೆಜಿಲ್, ರಷ್ಯಾ, ಚೀನಾ, ದಕ್ಷಿಣ ಆಫ್ರಿಕಾ ಸೇರಿದಂತೆ ಒಂಬತ್ತು ಸದಸ್ಯ ರಾಷ್ಟ್ರಗಳ ೪೨ ಪ್ರತಿನಿಧಿಗಳು ಭಾಗವಹಿಸುತ್ತಿದ್ದಾರೆ. ವೇಗವಾಗಿ ಬೆಳೆಯುತ್ತಿರುವ ನಗರ ಪ್ರದೇಶಗಳಲ್ಲಿನ ಸಾರಿಗೆ, ವಸತಿ ಮತ್ತು

ಸುಸ್ಥಿರ ಅಭಿವೃದ್ಧಿಯ ಸವಾಲುಗಳನ್ನು ಎದುರಿಸುವಲ್ಲಿ ಲೆಕ್ಕಪರಿಶೋಧನಾ ಸಂಸ್ಥೆಗಳ ಪಾತ್ರದ ಕುರಿತು ಇಲ್ಲಿ ಚಿಂತನ - ಮಂಥನ ನಡೆಯಲಿದೆ. ಎರಡು ದಿನಗಳ ಈ ಸಭೆಯಲ್ಲಿ ದತ್ತಾಂಶ ಆಧಾರಿತ ಲೆಕ್ಕಪರಿಶೋಧನೆ, ಆಧುನಿಕ ತಂತ್ರಜ್ಞಾನದ ಬಳಕೆ ಹಾಗೂ ನಾಗರಿಕ ಕೇಂದ್ರಿತ ಮೌಲ್ಯಮಾಪನ ವಿಧಾನಗಳ ಕುರಿತು ವಿವಿಧ ರಾಷ್ಟ್ರಗಳ ತಜ್ಞರು ವಿಚಾರ ಮಂಡಿಸಲಿದ್ದಾರೆ. ಶೃಂಗಸಭೆಯ ಭಾಗವಾಗಿ ಪ್ರತಿನಿಧಿಗಳು ಭಾರತೀಯ ವಿಜ್ಞಾನ ಸಂಸ್ಥೆ - ಐಐಎಸ್‌ಸಿಗೆ ಭೇಟಿ ನೀಡಲಿದ್ದು, ಸಮಾವೇಶವು ನಾಳೆ "ಬೆಂಗಳೂರು ಘೋಷಣಾ ಪತ್ರ ಹಾಗೂ ಮುಂದಿನ ಎರಡು ವರ್ಷಗಳ ಕಾರ್ಯಯೋಜನೆಯನ್ನು ಅಂಗೀಕರಿಸುವುದರೊಂದಿಗೆ ಮುಕ್ತಾಯಗೊಳ್ಳಲಿದೆ.

**********

ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಮಂಡ್ಯ ವತಿಯಿಂದ ನಾಳೆ ಬೆಳಿಗ್ಗೆ ೧೦ ಗಂಟೆಗೆ ಮಂಡ್ಯದ ನಾಲ್ವಡಿ ಕೃಷ್ಣರಾಜ ಒಡೆಯರ್ ಸಭಾಂಗಣದಲ್ಲಿ "ಬೀಜೋತ್ಸವ ಮತ್ತು ಪೂರ್ವ ಮುಂಗಾರು ಆಂದೋಲನ-೨೦೨೬" ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಈ ಕಾರ್ಯಕ್ರಮವನ್ನು ಕುಲಪತಿ ನಾರಾಯಣಸ್ವಾಮಿ ಉದ್ಘಾಟಿಸಲಿದ್ದಾರೆ.

**********

ರಾಜ್ಯ ಪೌರಾಡಳಿತ ನಿರ್ದೇಶನಾಲಯವು ಆಡಳಿತಾತ್ಮಕ ಹಿತದೃಷ್ಟಿಯಿಂದ ರಾಜ್ಯದ ವಿವಿಧ ಮಹಾನಗರ ಪಾಲಿಕೆ ಹಾಗೂ ಪುರಸಭೆಗಳ ಅಧಿಕಾರಿಗಳನ್ನು ವರ್ಗಾವಣೆಗೊಳಿಸಿ ಆದೇಶ ಹೊರಡಿಸಿದೆ. ಈ ಆದೇಶದನ್ವಯ ಸುಮಿತ್ರಾ ಜಿ.ಎ. ಅವರನ್ನು ಮಂಗಳೂರಿನಿಂದ ಧಾರವಾಡ, ಗುರುದಾಸ್ ಎಂ. ಅವರನ್ನು ಬೆಳಗಾವಿಯಿಂದ ಮೈಸೂರಿಗೆ, ಬೋನಪ್ಪ ಅವರನ್ನು ತುಮಕೂರಿನಿಂದ ಮಂಗಳೂರು, ದತ್ತಾತ್ರೇಯ ಅವರನ್ನು ಶಿವಮೊಗ್ಗದಿಂದ ಬೆಂಗಳೂರಿಗೆ, ಜಯಶ್ರೀ ಅವರನ್ನು ಧಾರವಾಡದಿಂದ ಬೆಳಗಾವಿಗೆ ಈ ರೀತಿ ಹಲವು ಅಧಿಕಾರಿಗಳನ್ನು ವಿವಿಧ ಪಾಲಿಕೆಗಳಿಗೆ ವರ್ಗಾಯಿಸಿ, ಜವಾಬ್ದಾರಿ ನೀಡಲಾಗಿದ್ದು, ನಿಯೋಜಿತ ಸ್ಥಳಗಳಲ್ಲಿ ತಕ್ಷಣವೇ ಅಧಿಕಾರ ವಹಿಸಿಕೊಳ್ಳುವಂತೆ ಸೂಚಿಸಲಾಗಿದೆ.

**********

ಭಾರತ ಸೇವಾದಳ ಬೆಂಗಳೂರು ಗ್ರಾಮಾಂತರ ಜಿಲ್ಲಾ ಘಟಕ ವತಿಯಿಂದ ಭಾರತ ಸೇವಾದಳ ಸಂಸ್ಥಾಪಕ, ಸ್ವಾತಂತ್ರ್ಯ ಹೋರಾಟಗಾರ ಡಾ.ನಾ.ಸು. ಹರ್ಡೀಕರ್ ಅವರ ೧೩೭ನೇ ಜನ್ಮದಿನಾಚರಣೆಯನ್ನು ದೊಡ್ಡಬಳ್ಳಾಪುರದಲ್ಲಿ ಆಚರಿಸಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಭಾರತ ಸೇವಾದಳದ ಜಿಲ್ಲಾ ಅಧ್ಯಕ್ಷ ಜಿ.ಲಕ್ಷ್ಮಿಪತಿ ನಾ.ಸು.ಹರ್ಡೀಕರ್ ಅವರು ತಮ್ಮ

ಉನ್ನತ ವ್ಯಾಸಂಗವನ್ನು ವಿದೇಶದಲ್ಲಿ ಮಾಡಿ ನಂತರ ಭಾರತಕ್ಕೆ ಮರಳಿ ಭಾರತದ ಸ್ವಾತಂತ್ರ್ಯದ ಚಳವಳಿಯಲ್ಲಿ ಭಾಗವಹಿಸಿ ಸ್ವಾತಂತ್ರ್ಯ ಹೋರಾಟಕ್ಕೆ ಯುವಕರನ್ನು ಸಂಘಟಿಸುವಲ್ಲಿ ಪ್ರಮುಖ ಪಾತ್ರವನ್ನು ವಹಿಸಿದ್ದರು. ಭಾರತ ಸೇವಾದಳ ಸ್ಥಾಪಿಸುವ ಮೂಲಕ ಶಿಸ್ತು ರಾಷ್ಟ್ರ ಪ್ರೇಮ ಮತ್ತು ಸೇವಾ ಮನೋಭಾವವನ್ನ ಬೆಳೆಸಿದರು ಎಂದು ಸ್ಮರಿಸಿದರು.

**********

ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ 'ಜ್ಞಾನ ಭಾರತಂ ಮಿಷನ್' ಅಡಿಯಲ್ಲಿ ದಾವಣಗೆರೆ ಜಿಲ್ಲೆಯ ಅಮೂಲ್ಯ ಐತಿಹಾಸಿಕ ಸಂಪತ್ತನ್ನು ಸಂರಕ್ಷಿಸುವ ಕಾರ್ಯಕ್ಕೆ ಒತ್ತು ನೀಡಲಾಗಿದ್ದು, ಶತಮಾನಗಳ ಇತಿಹಾಸವಿರುವ ಹಳೆಯ ಕೈಬರಹದ ಹಸ್ತಪ್ರತಿಗಳು ಹಾಗೂ ಶಿಲಾಶಾಸನಗಳನ್ನು ಆಧುನಿಕ ತಂತ್ರಜ್ಞಾನದ ಮೂಲಕ ಡಿಜಿಟಲೀಕರಣಗೊಳಿಸುವ ಸಮೀಕ್ಷೆಯನ್ನು ಇದೇ ೧೫ರೊಳಗೆ ಪೂರ್ಣಗೊಳಿಸುವಂತೆ ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ, ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜಿಲ್ಲೆಯಲ್ಲಿರುವ ಶಾಸನ ಮತ್ತು ಸ್ಮಾರಕಗಳ ಸಂರಕ್ಷಣೆ ಕುರಿತು ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಈ ಅಭಿಯಾನವು ಕೇವಲ ದಾಖಲಾತಿಗೆ ಸೀಮಿತವಾಗಿರದೆ, ಸಾಂಸ್ಕೃತಿಕ ಪರಂಪರೆಯನ್ನು ಉಳಿಸುವ ಬೃಹತ್ ಗುರಿಯನ್ನು ಹೊಂದಿದ್ದು, ದೇಶಾದ್ಯಂತ ಚದುರಿಹೋಗಿರುವ ಹಸ್ತಪ್ರತಿಗಳ ಮಾಹಿತಿಯನ್ನು ಒಂದೆಡೆ ಸಂಗ್ರಹಿಸಿ ಬೃಹತ್ 'ರಾಷ್ಟ್ರೀಯ ಜ್ಞಾನ ಭಂಡಾರ'ವನ್ನು ನಿರ್ಮಿಸುವುದು ಯೋಜನೆಯ ಮುಖ್ಯ ಉದ್ದೇಶವಾಗಿದೆ ಎಂದು ತಿಳಿಸಿದರು.

**********

ಅನಾನುಕೂಲಕರ ಹವಾಮಾನದಿಂದ ಉಂಟಾಗುವ ಬೆಳೆ ನಷ್ಟದಿಂದ ರೈತರನ್ನು ರಕ್ಷಿಸುವ ಉದ್ದೇಶದಿಂದ ಜಾರಿಗೆ ತರಲಾಗಿರುವ ಮರು ವಿನ್ಯಾಸಗೊಳಿಸಿದ ಹವಾಮಾನ ಆಧಾರಿತ ವಿಮೆ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವಂತೆ ಬಾಗಲಕೋಟೆ ಜಿಲ್ಲಾಧಿಕಾರಿ ಸಂಗಪ್ಪ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ನಡೆದ ಜಿಲ್ಲಾ ಮಟ್ಟದ ತಾಂತ್ರಿಕ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಯೋಜನೆಯ ಪ್ರಮುಖ ಅಂಶಗಳ ಕುರಿತು ಚರ್ಚಿಸಿದರು. ಮಳೆ, ತಾಪಮಾನ ಹಾಗೂ ತೇವಾಂಶದಂತಹ ಹವಾಮಾನ ವೈಪರೀತ್ಯಗಳಿಂದ ತೋಟಗಾರಿಕೆ ಮತ್ತು ವಾಣಿಜ್ಯ ಬೆಳೆಗಳಾದ ದಾಳಿಂಬೆ ಹಾಗೂ ದ್ರಾಕ್ಷಿ ಬೆಳೆಗಳಿಗೆ ಉಂಟಾಗುವ ನಷ್ಟಕ್ಕೆ ಪರಿಹಾರ ನೀಡುವ ಉದ್ದೇಶದಿಂದ ಈ ಯೋಜನೆ ಜಾರಿಗೊಂಡಿದೆ ಎಂದು ತಿಳಿಸಿದರು. ಈ ಯೋಜನೆಯಲ್ಲಿ ಬೆಳೆ ಕಟಾವು ಪರಿಶೀಲನೆಗೆ ಬದಲಾಗಿ ಹವಾಮಾನ ಕೇಂದ್ರಗಳ ದತ್ತಾಂಶಗಳ ಆಧಾರದ ಮೇಲೆ ಪರಿಹಾರ ನೀಡಲಾಗುತ್ತದೆ. ಬೆಳೆ ಬೆಳವಣಿಗೆಯ

ಹಂತಗಳನ್ನು ಗಮನದಲ್ಲಿಟ್ಟು ವಿಮಾ ಮೊತ್ತ ನಿಗದಿಪಡಿಸಲಾಗುತ್ತದೆ. ಹವಾಮಾನ ಸೂಚ್ಯಂಕಗಳ ಆಧಾರದ ಮೇಲೆ ಸ್ವಯಂಚಾಲಿತವಾಗಿ ಪರಿಹಾರ ಬಿಡುಗಡೆ ಮಾಡಲಾಗುತ್ತಿದ್ದು, ಬೆಳೆ ಹಾನಿಯ ಸಂದರ್ಭದಲ್ಲಿ ಬೆಳೆ ಸಾಲ ಪಡೆದ ಹಾಗೂ ಸಾಲ ಪಡೆಯದ ರೈತರಿಗೆ ನೇರ ವಿಮಾ ಪಾವತಿ ಸಿಗಲಿದೆ ಎಂದು ಹೇಳಿದರು.

*******END*******